<u>**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**</u>

<u>**ಸಿಸಿ ನಂ.173/2023**</u>

**ಫಿರ್ಯಾದುದಾರರುಃ** ಸಲ್ಮಾನ್ ಖಾನ್, ಬಿನ್ ಅರಬ್ ಜಾನ್,
ವಯಸ್ಸು 34 ವರ್ಷ, ವಾಸಃ ಲಾಲ್ ಬಾಂಡ್ ಬೀದಿ,
ಹುಣಸೂರು ಟೌನ್.

**– ವಿರುದ್ಧ –**

**ಆರೋಪಿಃ** ಸುರೇಶ, ಬಿನ್ ಕಲ್ಲೇಗೌಡ, ವಯಸ್ಸು 37 ವರ್ಷ,
ವಾಸಃ ತಿರುಮಲಪುರ ಗ್ರಾಮ, ಹರನಹಳ್ಳಿ ಹೋಬಳಿ,
ಪಿರಿಯಾಪಟ್ಟಣ ತಾಲ್ಲೂಕು.

<u>**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 313 ರ ಅಡಿಯಲ್ಲಿ ಆರೋಪಿಯ ಹೇಳಿಕೆ**</u>

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ಸಲ್ಮಾನ್ ಖಾನ್‌ರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿದಿದೆ |
| ಪ್ರಶ್ನೆ 2: | ಪಿ.ಡಬ್ಲ್ಯೂ1 ಸಲ್ಮಾನ್ ಖಾನ್‌ರವರು ತಮ್ಮ ಸಾಕ್ಷ್ಯದಲ್ಲಿ, ನೀವು ಮತ್ತು ಅವರು ಹಲವಾರು ವರ್ಷಗಳಿಂದ ಪರಿಚಯಸ್ಥರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 2: | ಪಿ.ಡಬ್ಲ್ಯೂ1 ರವರು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಸದರಿ ಪರಿಚಯದ ಆಧಾರದ ಮೇಲೆ ನೀವು ದಿನಾಂಕಃ 01.09.2022 ರಂದು ಅವರಿಂದ ರೂ.3,00,000/- ಗಳನ್ನು ಅಲ್ಪಾವಧಿಯೊಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿರುತ್ತೀರಿ |

| | |
|---|---|
| | ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 3: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಸದರಿ ಸಾಲದ ಮರುಪಾವತಿಗಾಗಿ 16.12.2020 ರ ದಿನಾಂಕ ನಮೂದಿಸಿ ಬೈಲಕುಪ್ಪೆ ಶಾಖೆಯ, ಇಂಡಿಯನ್ ಓವರ್ ಸೀಸ್ ಬ್ಯಾಂಕ್ ನ ಚೆಕ್ ಸಂಖ್ಯೆ 561652 ನ್ನು ರೂ.3,00,000/-ಗಳಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 4: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಆದ ದಿನಾಂಕಃ 28.12.2020ರಂದು ಕೆನರಾ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ" ಎಂಬ ಕಾರಣಕ್ಕಾಗಿ ಸದರಿ ಚೆಕ್ ಅಮಾನ್ಯಗೊಂಡು ದಿನಾಂಕಃ 29.12.2023 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ದಿನಾಂಕ 21.01.2023 ರಂದು ಅವರು ನಿಮಗೆ ತಮ್ಮ ವಕೀಲರ ಮೂಲಕ ನೊಂದಾಯಿತ ಅಂಚೆಯ ಮೂಲಕ ನೋಟೀಸನ್ನು ನೀಡಿದ್ದು, ಸದರಿ ನೋಟೀಸ್ ನ್ನು ನೀವು ಉದ್ದೇಶಪೂರ್ವಕವಾಗಿ ತಿರಸ್ಕರಿಸಿದ್ದು, ಈ ಬಗ್ಗೆ ಮಾಹಿತಿ ಇದ್ದರೂ ಸಹ ನೀವು ಫಿರ್ಯಾದುದಾರರಿಗೆ ನೀಡಬೇಕಾದ ಚೆಕ್ಕಿನ ಹಣವನ್ನು ಮರುಪಾವತಿಸಿಲ್ಲ ಹಾಗು ನೋಟೀಸಿಗೆ ಉತ್ತರವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಈವರೆಗೂ ಸಾಲದ ಹಣವನ್ನು ಮರುಪಾವತಿಸದೆ ಇರುವುದರಿಂದ ನೆಗೋಶಿಯೇಬಲ್ ಇನ್ಸ್ಟ್ರುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹ, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ, ಅಂಚೆ ಲಕೋಟೆ ಮತ್ತು ದೂರನ್ನು ನಿಪಿ-1 ರಿಂದ ನಿಪಿ-6 ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 8: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇಲ್ಲ |
| ಪ್ರಶ್ನೆ 9: | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇಲ್ಲ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 30.07.2025.

ANITHA

Digitally signed by ANITHA
Date: 2025.07.30 17:41:54 +0530

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ